# ಕೊರೋನಾ ನಿಯಂತ್ರಣ: ಇಂದು ಸಿಎಂ ಸರ್ವಪಕ್ಷ ಸಭೆ

## ನಗರದ ಸಚಿವ, ಸಂಸದ, ಶಾಸಕರ ಜತೆ ಮಾತುಕತೆ ಎಲ್ಲರಿಂದ ಅಭಿಪ್ರಾಯ ಸಂಗ್ರಹಿಸಿ ಮುಂದಿನ ಕ್ರಮ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 26/6



ರಾಜಧಾನಿಯಲ್ಲಿ ಕೊರೋನಾ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಶುಕ್ರವಾರ ನಗರ ವ್ಯಾಪ್ತಿಯ ಎಲ್ಲ ಪಕ್ಷಗಳ ಜನಪ್ರತಿನಿಧಿಗಳ ಸಭೆ ಕರೆದಿದ್ದಾರೆ.

ವಿಧಾನಸೌಧದಲ್ಲಿ ಮಧ್ಯಾಹ್ನ 12 ಗಂಟೆಗೆ ಸಭೆ ನಡೆಯಲಿದೆ. ಬೆಂಗಳೂರಿನ ಎಲ್ಲಾ ಶಾಸಕರು, ಸಂಸದರು ಮತ್ತು ಸಚಿವರು ಸಭೆಯಲ್ಲಿ ಭಾಗವಹಿಸಲಿದ್ದಾರೆ. ನಗರದಲ್ಲಿ ಕೊರೋನಾ ನಿಯಂತ್ರಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚೆ ನಡೆಯಲಿದೆ. ಎಲ್ಲ ಪಕ್ಷಗಳ ಶಾಸಕರು, ಸಂಸದರು ಅಭಿಪ್ರಾಯ ಸಂಗ್ರಹಿಸಿದ ಬಳಿಕ ಸರ್ಕಾರ ಮುಂದಿನ ಕ್ರಮ ಕೈಗೊಳ್ಳಲಿದೆ.

ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಯಡಿಯೂರಪ್ಪ, ಮಹಾಮಾರಿ ಕೊರೋನಾ ಸೋಂಕು ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬಹುದಾದ ಕ್ರಮದ ಬಗ್ಗೆ ಸಚಿವರು ಹಾಗೂ ಅಧಿಕಾರಿಗಳ ಸಭೆ ಕರೆದು ಚರ್ಚೆ ನಡೆಸಿದ್ದೇನೆ. ಶುಕ್ರವಾರ ನಗರದ ಎಲ್ಲಾ ಪಕ್ಷದ ಶಾಸಕರು ಹಾಗೂ ಸಚಿವರೊಂದಿಗೆ ಪ್ರತ್ಯೇಕವಾಗಿ ಸಮಾಲೋಚನೆ ನಡೆಸಿ ಅಭಿಪ್ರಾಯ ಪಡೆಯಲಾಗುವುದು ಎಂದು ತಿಳಿಸಿದರು.